**File No: DTE-CDC0CDC2/247/2020-JD CDC-DEPT TECH EDUCATION**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿ: 14-12-2020.

## -: ಸುತ್ತೋಲೆ :-

ವಿಷಯ:- 2020-21ನೇ ಸಾಲಿನಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ., ಉನ್ನತ ವ್ಯಾಸಂಗದ ಸಲುವಾಗಿ ಕೆಇಎ, ಬೆಂಗಳೂರು ಇಲ್ಲಿ ದಾಖಲಾತಿ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ಉಲ್ಲೇಖ:- ವಿವಿಧ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಂದ ಸ್ವೀಕೃತವಾದ ಪತ್ರಗಳು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳಲ್ಲಿ 2020-21ನೇ ಸಾಲಿನಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ., ಉನ್ನತ ವ್ಯಾಸಂಗದ ಸಲುವಾಗಿ ಕೆಇಎ ಬೆಂಗಳೂರು, ಇಲ್ಲಿ ದಾಖಲಾತಿ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ವಿವಿಧ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಿಭಾಗಗಳ ಉಪನ್ಯಾಸಕರುಗಳಿಗೆ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಕೋರಿರುತ್ತಾರೆ.

ತತ್ಸಂಬಂಧ, 2020-21ನೇ ಸಾಲಿನಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ ಉನ್ನತ ವ್ಯಾಸಂಗದ ಸಲುವಾಗಿ ಕೆಇಎ ಬೆಂಗಳೂರು, ಇದರ ಮೂಲಕ PGCET-2020ಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆ ಬರೆಯಲು ಇಲಾಖೆಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರದ ಆಧಾರದನ್ವಯ ವಿವಿಧ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಿಭಾಗಗಳ ಉಪನ್ಯಾಸಕರುಗಳಿಗೆ PGCET-2020ಗೆ ಸಂಬಂಧಿಸಿದಂತೆ, ಕೆಇಎ ಬೆಂಗಳೂರು, ಇಲ್ಲಿ ದಾಖಲಾತಿ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ಅನುಮತಿ ನೀಡಲಾಗಿದೆ.

ಮುಂದುವರೆದು, PGCET-2020 ಮುಖಾಂತರ 2020-21ನೇ ಸಾಲಿನಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ., ಉನ್ನತ ವ್ಯಾಸಂಗದ ಸಲುವಾಗಿ ಆಯ್ಕೆಯಾಗುವ ಉಪನ್ಯಾಸಕರುಗಳನ್ನು ಕಡ್ಡಾಯವಾಗಿ ಕೆಸಿಎಸ್ ನಿಯಮ 61(3)ರ ಅಪೆಂಡಿಕ್ಸ್-2'ಎ'ಯ ನಿಯಮ1 ಉಪನಿಯಮ (1) ರಿಂದ ಉಪನಿಯಮ(10)ರನ್ವಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಡಿಸಿ ನಿಯೋಜಿಸಲು ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

(ಟಿಪ್ಪಣಿ ಮತ್ತು ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಜಂಟಿನಿರ್ದೇಶಕರು(ಸಿಡಿಸಿ)
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ: ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

1) ಕಾರ್ಯ ನಿರ್ವಾಹಕ ನಿರ್ದೇಶಕರು, ಕೆಇಎ, ಬೆಂಗಳೂರು
2) ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದಿರುವ ವಿವಿಧ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ
3) ಇಲಾಖೆಯ ಇ-ಆಡಳಿತ ವಿಭಾಗಕ್ಕೆ ಇಲಾಖೆಯ ವೆಬ್ ಸೈಟನಲ್ಲಿ ಪ್ರಕಟಿಸಲು.